# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ನೀಡಿರುವ ಅನುದಾನದಲ್ಲಿ ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಹಾಗೂ ಅನುಸೂಚಿತ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆಯಡಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು..

**ಓದಲಾಗಿದೆ:-**

1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ: 31.12.2022.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 339 ಬಿಎಂಎಸ್ 2021, ದಿನಾಂಕ: 27.05.2021 ,26.08.2021 , 26.11.2021 ಹಾಗೂ 22.04.2021.
3. ಆರ್ಥಿಕ ಇಲಾಖೆ ಅನಧಿಕೃತ ಟಿಪ್ಪಣಿ: ಆಇ 339 ವೆಚ್ಚ-3/2021, ದಿನಾಂಕ:30.07.2021.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಲೆಶಾ/ಸಿಆರ್-1/2021-22, ದಿನಾಂ:ಕ:04.01.2022.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಆದೇಶದಲ್ಲಿ ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಲೆಕ್ಕಶೀರ್ಷಿಕೆ: 2225-03-277-2-62 ರಡಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ ಮೊದಲನೇ, ಎರಡನೇ ಮತ್ತು ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಹಾಗೂ ಅನುಸೂಚಿತ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ ಲೆಕ್ಕಶೀರ್ಷಿಕೆ:2225-03-001-0-06 ಯಡಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ಅನಧಿಕೃತ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಲೆಕ್ಕಶೀರ್ಷಿಕೆ: 2225-03-277-2-62 ಗೆ 2021-22 ನೇ ಅಯವ್ಯಯದಲ್ಲಿ ಒದಗಿಸಿರುವ ಅನುದಾನವನ್ನು ಪರಿಷ್ಕರಿಸಿ ರೂ.17299.99 ಲಕ್ಷಗಳಿಗೆ ನಿಗದಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಲೆಕ್ಕಶೀರ್ಷಿಕೆ: 2225-03-277-2-62 ರಡಿ ಹಾಗೂ ಅನುಸೂಚಿತ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ ಲೆಕ್ಕಶೀರ್ಷಿಕೆ:2225-03-001-0-06 ಯಡಿ ಒದಗಿಸಿರುವ ಅನುದಾನದಲ್ಲಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

2/2/22

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 339 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 02-02-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ 2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯದಲ್ಲಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**(ರೂ. ಲಕ್ಷಗಳಲ್ಲಿ)**

| ಕ್ರ ಸಂ | **ಕಾರ್ಯಕ್ರಮ/ ಲೆಕ್ಕಶೀರ್ಷಿಕೆ** | **2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯ** | **ಮೊದಲನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ** | **ಎರಡನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ** | **ಮೂರನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ** | **ನಾಲ್ಕನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ** |
|---|---|---|---|---|---|---|
| **1.** | **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2225-03-001-0-06** | | | | | |
| | ಪರಿಶಿಷ್ಟ ಜಾತಿ ಉಪಯೋಜನೆ(422)SCSP | 12.67 | 3.17 | 0.00 | 0.00 | 9.50 |
| | ಗಿರಿಜನ ಉಪಯೋಜನೆ(423)TSP | 2.29 | 0.57 | 0.00 | 0.00 | 1.72 |
| | **ಒಟ್ಟು** | **14.96** | **3.74** | **0.00** | **0.00** | **11.22** |
| **2.** | **ಹಿಂದುಳಿದ ವರ್ಗದವರಿಗೆ ಹೊಸ ಮುರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ 2225-03-277-2-62** | | | | | |
| | ಹಿಂದುಳಿದ ವರ್ಗದವರಿಗೆ ಹೊಸ ಮುರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಆಬ್ಜೆಕ್ಟೀವ್ ಕೋಡ್-(059) | 13760.22 | 3837.75 | 3042.36 | 3440.05 | 3440.06 |
| | ಪರಿಶಿಷ್ಟ ಜಾತಿ ಉಪಯೋಜನೆ ಆಬ್ಜೆಕ್ಟೀವ್ ಕೋಡ್(422) SCSP | 2359.25 | 658.00 | 521.63 | 589.81 | 589.81 |
| | ಗಿರಿಜನ ಉಪಯೋಜನೆ TSP ಆಬ್ಜೆಕ್ಟೀವ್ ಕೋಡ್(423) | 1180.52 | 329.25 | 261.01 | 295.13 | 295.13 |
| | **ಒಟ್ಟು** | **17299.99** | **4825.00** | **3825.00** | **4324.99** | **4325.00** |

2/2/22